ನಂ. 544. ತಾರೀಖು 24ನೇ ಫಿಬ್ರವರೀ 1885.

ತಿರಮಕೂಡ್ಲು ನರಸೀಪುರದ ಸ್ಪೆಷೆಲ್ ಸಬ್ ರೆಜಿಸ್ಟ್ರಾರ್ ಮಾ॥ ರಾ॥ ಲಕ್ಷ್ಮೀನರಸಿಂಹಯ್ಯನವರಿಗೆ 15 ದಿವಸಗಳ ಪ್ರಿವಿಲೀಜ್ ರಜಾ ಕೊಡಲ್ಪಟ್ಟಿರುವದರಿಂದ, ಸದರೀ ತಾಲ್ಲೂಕು ಅಮಲ್ದಾರರು, ಲಕ್ಷ್ಮೀನರಸಿಂಹಯ್ಯನವರ ಗೈರ್ ಹಾಜರಿಯಲ್ಲಿ ಯಾ ಮತ್ತೊಂದು ಹುಕ್ಕುಂ ಕೊಡುವ ಪರಿಯಂತ, ಸದರೀ ಸ್ಪೆಷೆಲ್ ಸಬ್ ರೆಜಿಸ್ಟ್ರಾರ್ ಕೆಲಸಗಳನ್ನು ಚಲಾಯಿಸುವಂತೆ ನಿಯಮಿಸಲ್ಪಟ್ಟಿರುತ್ತಾರೆ.

ಹೆಚ್. ಹಡರ್ಸ್,
ಇನ್‌ಸ್ಪೆಕ್ಟರ್ ಜನರಲ್ ಆಫ್ ರಿ॥, ಮೈಸೂರು.

ಮೈಸೂರು ರೆವಿನ್ಯೂ ಸರ್ವೇ ಮತ್ತು ಸೆಟಲ್‌ಮೆಂಟ್ ಇಲಾಖೆ.

ಇಸ್ತಿಹಾರ್‌ನಾಮೆ.

ನಂ. 787. ತಾರೀಖು 25ನೇ ಫಿಬ್ರವರೀ 1885.

ಸರ್ವರಿಗೂ ತಿಳಿಯುವದಕ್ಕೋಸ್ಕರ ಇದರಿಂದ ಪ್ರಕಟಿಸಲ್ಪಡುವದೇನಂದರೆ, ಎಡತೊರೆ ಮತ್ತು ನರಸೀಪುರ ತಾಲ್ಲೂಕುಗಳ ಸೆಟಿಲ್ ಆಗದೆ ಇರುವ ಭಾಗಗಳ ಸಮಸ್ತ ಸರಕಾರೀ ಗ್ರಾಮಗಳ ಸರ್ವೇ ಜವಾಬ್ದಾರಿಯು ಇದೇ ಇಸವಿ ಮಾರ್ಚೀ ತಾರೀಖು 15ನೇ ದಿನ ಯಾ ಆ ಪುಮಾರಿಗೆ ಪ್ರಾರಂಭಿಸಲ್ಪಡುತ್ತೆ.

ಜೆ. ಪಿ. ಗ್ರಾಂಟ್,
ಸೂಪರ್‌ಟೆಂಡೆಂಟ್, ರೆವಿನ್ಯೂ ಸರ್ವೆ ಮತ್ತು ಸೆಟಲ್‌ಮೆಂಟ್.

ಬೆಂಗಳೂರು ಡಿಸ್ಟ್ರಿಕ್ಟ್.

ಬೆಂಗಳೂರು ಡಿ॥ ಸಬ್‌ಜಡ್ಜ್‌ರವರ ಕೋರ್ಟ್‌ನಲ್ಲಿ.

1885ನೇ ಇಸವಿ ಅರ್ಜೀ ನಂಬರ್ 86.

ಮೃತಪಟ್ಟ ಜೊಳಲಕೆರೆ ತಾಲ್ಲೂಕು ಮದ್ದೇರೀ ಗ್ರಾಮದ ಸುಂಕದ ರಂಗಂಣನ ಆಸ್ತೀ ವಿಷಯದಲ್ಲಿ—

ಅರ್ಜೀದಾರ್ ರಾಮಂಣ ಮೃತಪಟ್ಟ ಸದರೀ ಸುಂಕದ ರಂಗಂಣನವರಿಗೆ ಮಗ ಆಗಬೇಕೆಂಬ ಹಕ್ಕುದಾರೀ ಮೇಲೆ ಹೊಳಲಕೆರೆ ತಾಲ್ಲೂಕು ಮದ್ದೇರಿ ಸ್ಥಳದ ರಾಮಂಣನೆಂಬವರು ಸದರೀ ಮದ್ದೇರಿ ವಾಸಸ್ಥರಾಗಿ ಮೃತಪಟ್ಟ ಸುಂಕದ ರಂಗಂಣನವರ ಜಿಂದಗಿ ಬಗ್ಯಾಗಿ ಬರತಕ್ಕ 2,000 ರೂಪಾಯಿ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟ್ ಮೇರಿಗೆ ಸರಟಿಫಿಕೇಟ್ ಬ್ಯೈ ಈ [illegible] ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ರಾಮಂಣನವರ ಅರ್ಜೀಯನ್ನು 1885ನೇ ಇಸವಿ ಮಾರ್ಚೀ ತಿಂಗಳು ತಾರೀಖು 26ರಲ್ಲು ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಸುಂಕದ ರಂಗಂಣನವರ ಆಸ್ತಿಗೆ ಹಕ್ಕುದಾರರಾದ ವಿಷ್ಟರೂ ಈ ಕೋರ್ಟ್‌ನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇಧೆ.

1885ನೇ ಇಸವಿ ಫಿಬ್ರವರೀ ತಿಂಗಳು 24ನೇ ತಾರೀಖಿನಲ್ಲಿ ಕೋರ್ಟು ಮೊಹರಿನಿಂದ ನಮ್ಮ ದಸ್ತಖತ್ತೊಪನೆ ಕೊಡೋಣಾಗಿಧೆ.

ಸಿ. ಕೈಸ್,
ಸಬ್‌ಜಡ್.

ಮೈಸೂರು ಡಿಸ್ಟ್ರಿಕ್ಟ್.

ಮೈಸೂರು ಡಿಸ್ಟ್ರಿಕ್ಟ್ ಜಡ್ಜ್‌ರವರ ಕೋರ್ಟ್‌ನಲ್ಲಿ.

1885ನೇ ಇಸವಿ ಅರ್ಜೀ ನಂಬರ್ 50.

ಮೃತಪಟ್ಟ ಚನ್ನಪ್ಪನವರ ಆಸ್ತಿ ವಿಷಯದಲ್ಲಿ—

ಅರ್ಜೀದಾರ್ ಪುಟ್ಟವೀರಮ್ಮ ಮೃತಪಟ್ಟ ಸದರೀ ಚನ್ನಪ್ಪನವರಿಗೆ ಹೆಂಡತಿ ಆಗಬೇಕೆಂಬ ಹಕ್ಕುದಾರೀ ಮೇಲೆ ಮೈಸೂರು ಕಿಲ್ಲೇ ಸ್ಥಳದ ಸದರೀ ಪುಟ್ಟವೀರಮ್ಮ ಸದರೀ ವಾಸಸ್ಥರಾಗಿ ಮೃತಪಟ್ಟ ಚನ್ನಪ್ಪನವರ ಜಿಂದಗಿ ಬಗ್ಯಾಗಿ ಬರತಕ್ಕ ₹200 ರೂಪಾಯಿಗಳ ಸಾಲವನ್ನು ವಸೂಲ್‌ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟ್ ಮೇರಿಗೆ ಸರ್ಟಿಫಿಕೇಟ್ ಬ್ಯೈ ಈ ಕೋರ್ಟ್‌ಗೆ ಪಾಯಿಷ್ ಮಾಡಿರುತ್ತಾಳೆ.

ಸದರೀ ದರಖಾಸ್ತುದಾರಳಾದ ಪುಟ್ಟವೀರಮ್ಮನ ಅರ್ಜೀಯನ್ನು 1885ನೇ ಇಸವಿ ಮಾರ್ಚೀ ತಿಂಗಳು ತಾರೀಖು 16ರಲ್ಲು ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯು ವಿಮರ್ಶೆ ಮಾಡಲಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಚನ್ನಪ್ಪನವರ ಆಸ್ತಿಗೆ ಹಕ್ಕು ದಾರರಾದ ವಿಶ್ವರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1885ನೇ ಇಸವಿ ಅರ್ಜೀ ನಂಬರ್ 64.

ಮೃತಪಟ್ಟ ತುಕ್ಕಣ್ಣನವರ ಆಸ್ತೀ ವಿಷಯದಲ್ಲಿ—

ಅರ್ಜೀದಾರ್ ರೇವಂಣ, ಮೈನರ್ ಗಾರ್ಡಿಯರ್ ಮತ್ತು ತಾಯಿ ಕೃಷ್ಣಾಬಾಯಮ್ಮ ಮೃತಪಟ್ಟ ಸದರೀ ತುಕ್ಕಣ್ಣನವರಿಗೆ ಮಗ ಆಗಬೇಕೆಂಬ ಹಕ್ಕುದಾರೀ ಮೇಲೆ ಮೈಸೂರು ನಜರಬಾದ್ ಸ್ಥಳದ ರೇವಂಣ, ಮೈನರ್ ಗಾರ್ಡಿಯರ್ ಮತ್ತು ತಾಯಿ ಕೃಷ್ಣಾಬಾಯಮ್ಮ ಸದರೀ ವಾಸಸ್ಥರಾಗಿ ಮೃತಪಟ್ಟ ತುಕ್ಕಣ್ಣನವರ ಜಿಂದಗಿ ಬಗ್ಯಾಗಿ ಬರತಕ್ಕ 950 ರೂಪಾಯಿಗಳ ಸಾಲಗಳನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟ್ಸ ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ರೇವಂಣ, ಮೈನರ್ ಗಾರ್ಡಿಯರ್ ಮತ್ತು ತಾಯಿ ಕೃಷ್ಣಾಬಾಯಮ್ಮನ ಅರ್ಜೀಯನ್ನು 1885ನೇ ಇಸವಿ ಮಾರ್ಚೀ ತಿಂಗಳು ತಾರೀಖು 16ರಲ್ಲು ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ತುಕ್ಕಣ್ಣನವರ ಆಸ್ತಿಗೆ ಹಕ್ಕುದಾರರಾದ ವಿಶಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯು ಪಡಿಸಿ ಇದೆ.

1885ನೇ ಇಸವಿ ಅರ್ಜೀ ನಂಬರ್ 79.

ಮೃತಪಟ್ಟ ವೆಂಕಟರಾಮಾಶಾಸ್ತ್ರಿ ಆಸ್ತಿ ವಿಷಯದಲ್ಲಿ—

ಅರ್ಜೀದಾರು ವೆಂಕಟರಂಗಾಶಾಸ್ತ್ರೀ ಮೃತಪಟ್ಟ ಸದರೀ ವೆಂಕಟರಾಮಾಶಾಸ್ತ್ರಿರಿಗೆ ತಮ್ಮ ಆಗಬೇಕೆಂಬ ಹಕ್ಕುದಾರೀ ಮೇಲೆ ನಂಜನೆಗೂಡು ಕಸಬಾ ಸ್ಥಳದ ಸದರೀ ವೆಂಕಟರಂಗಾಶಾಸ್ತ್ರೀರು ತಿರಮಕೂಡ್ಲು ವಾಸಸ್ಥರಾಗಿ ಮೃತಪಟ್ಟ ವೆಂಕಟರಾಮಾಶಾಸ್ತ್ರೀರ ಜಿಂದಗಿ ಬಗ್ಯಾಗಿ ಬರತಕ್ಕ 490 ರೂಪಾಯಿಗಳ ಸಾಲಗಳನ್ನು ವಸೂಲ್ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟ್ಸ ಮೇರಿಗೆ ಸರಟಿಫಿಕೇಟ್ ಬಗ್ಯೆ ಕೋರ್ಟಿಗೆ ಖಾಯಿಷ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ವೆಂಕಟರಂಗಾಶಾಸ್ತ್ರೀರ ಅರ್ಜೀಯನ್ನು 1885ನೇ ಇಸವಿ ಮಾರ್ಚೀ ತಿಂಗಳು ತಾರೀಖು 16ರಲ್ಲು ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ವೆಂಕಟರಾಮಾಶಾಸ್ತ್ರಿರ ಆಸ್ತಿಗೆ ಹಕ್ಕುದಾರರಾದ ವಿಶಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯು ಪಡಿಸಿ ಇದೆ.

1885ನೇ ಇಸವಿ ವಿ॥ ಅರ್ಜೀ ನಂಬರ್ 80.

ಮೃತಪಟ್ಟ ಕೊಂಬೂರು ಶ್ರೀನಿವಾಸರಾಘವಾಚಾರ್ಯರ ಆಸ್ತಿ ವಿಷಯದಲ್ಲಿ—

ಅರ್ಜೀದಾರ್ ಮೈನರ್ ಶ್ರೀನಿವಾಸಾಚಾರ್ಯ ಗಾರ್ಡಿಯರ್ ಲಕ್ಷ್ಮಮ್ಮ ಮೃತಪಟ್ಟ ಸದರೀ ಕೊಂಬೂರು ಶ್ರೀನಿವಾಸರಾಘವಾಚಾರ್ರಿಗೆ ಮೈನರ್ ಪತ್ತ ಮಗನಾಗಬೇಕೆಂಬ ಹಕ್ಕುದಾರೀ ಮೇಲೆ ಮೈಸೂರು ದೇವರಾಜ ಅಗ್ರಹಾರ ಸ್ಥಳದ ಲಕ್ಷ್ಮಮ್ಮನು ಸದರೀ ವಾಸಸ್ಥನಾಗಿ ಮೃತಪಟ್ಟ ಶ್ರೀನಿವಾಸರಾಘವಾಚಾರ್ರ ಜಿಂದಗಿ ಬಗ್ಯಾಗಿ ಬರತಕ್ಕ 2,000 ರೂಪಾಯಿ ಸಾಲವನ್ನು ವಸೂಲ್ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟ್ಸ ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾಳೆ.

ಸದರೀ ದರಖಾಸ್ತುದಾರಳಾದ ಮೈನರ್ ಶ್ರೀನಿವಾಸಾಚಾರ್ ಗಾರ್ಡಿಯರ್ ಲಕ್ಷ್ಮಮ್ಮನ ಅರ್ಜೀಯನ್ನು 1885ನೇ ಇಸವಿ ಮಾರ್ಚೀ ತಿಂಗಳು ತಾರೀಖು 16ರಲ್ಲು ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಶ್ರೀನಿವಾಸರಾಘವಾಚಾರ್ರ ಆಸ್ತಿಗೆ ಹಕ್ಕುದಾರರಾದ ವಿಶಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿಇದೆ.